ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ... ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI RNI No: KARKAN/2014/54928 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11
ಸಂಚಿಕೆ: 120 Issuse:120
ದಿನಾಂಕ:16–06–2024 Date:16-06-2024
ರವಿವಾರ Sunday
ಪುಟ:4 Page:4
ರೂ.: 3–00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080–31212322 ಮೊ.: 9902543494 E-mail:sahayavany@gmail.com

# ಭೀಕರ ಅಪಘಾತ 6 ಸಾವು

## ಚಿತ್ರದುರ್ಗದಲ್ಲಿ ಒಂದೇ ಕುಟುಂಬದ ನಾಲ್ವರು, ಬಿಡದಿ ಬಳಿ ಇಬ್ಬರು ವಿದ್ಯಾರ್ಥಿಗಳು ಬಲಿ





ಚಿತ್ರದುರ್ಗ:–
ವೇಗವಾಗಿ ಬಂದ ಲಾರಿಯು ಮುಂದೆ ಹೋಗುತ್ತಿದ್ದ ಕಾರಿಗೆ ಹಿಂದಿನಿಂದ ಡಿಕ್ಕಿ ಹೊಡೆದು ಬೆಂಗಳೂರಿನ ಇಬ್ಬರು ಮಹಿಳೆಯರು,ಮಗು ಸೇರಿ ಒಂದೇ ಕುಟುಂಬದ ನಾಲ್ವರು ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ರಾಷ್ಟ್ರೀಯ ಹೆದ್ದಾರಿ 4ರ ಭರಮಸಾಗರ ಹೋಬಳಿಯ ಚಿಕ್ಕಬೆನ್ನೂರು ಬಳಿ ಇಂದು ಮುಂಜಾನೆ ನಡೆದಿದೆ.

ಲಾರಿ ಮತ್ತು ಕಾರು ಚಿತ್ರದುರ್ಗ ಕಡೆಯಿಂದ ದಾವಣಗೆರೆ ಕಡೆಗೆ ಹೊರಟಿತ್ತು. ಈ ವೇಳೆ ಅತೀ ವೇಗದಲ್ಲಿ ಬಂದ ಲಾರಿ ಹಿಂಬದಿಯಿಂದ ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೆಂಗಳೂರಿನ ಥಣಿಸಂದ್ರದ ಪ್ರಜ್ವಲ್ ರೆಡ್ಡಿ(30), ಹರ್ಷಿತಾ(28), ಮೋಹನ್ (2) ಸೇರಿ ನಾಲ್ವರು ಮೃತ ದುರ್ದೈವಿಗಳು. ಕಾರಿಲ್ಲಿದ್ದ ನಾಲ್ವರು ಮೃತಪಟ್ಟಿದ್ದು, ಇನ್ನುಳಿದ ಐವರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ದಾವಣಗೆರೆಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬೆಂಗಳೂರಿನಿಂದ ಗೋವಾಕ್ಕೆ ಕಾರಿನಲ್ಲಿ 9 ಮಂದಿ ಹೋಗುತ್ತಿದ್ದಾಗ ಮುಂಜಾನೆ ಚಿಕ್ಕಬೆನ್ನೂರು ಗ್ರಾಮದ ಬಳಿ ಅತಿ ವೇಗದಲ್ಲಿ ಬಂದ ಲಾರಿ ಹಿಂಬದಿಯಿಂದ ಡಿಕ್ಕಿ ಹೊಡೆದಿದ್ದರಿಂದ ಈ ಅವಘಡ ಸಂಭವಿಸಿದೆ.

ಸುದ್ದಿ ತಿಳಿದ ತಕ್ಷಣವೇ ಸ್ಥಳಕ್ಕೆ ಭರಮಸಾಗರ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ. ಕಾರಿನಲ್ಲಿದ್ದವರು ಒಂದೇ ಕುಟುಂಬಕ್ಕೆ ಸೇರಿದವರಾಗಿದ್ದು,ಗೋವಾಗೆ ಪ್ರವಾಸ ಹೊರಟಿದ್ದರು ದೊಡ್ಡ ಲಾರಿಯು ಗುದ್ದಿದ ರಭಸಕ್ಕೆ ಕಾರಿನ ಹಿಂಭಾಗದಲ್ಲಿ ದೊಡ್ಡ ಪ್ರಮಾಣದ ಹಾನಿ ಉಂಟಾಗಿದೆ. ಈ ವೇಳೆ

ಹಿಂಬದಿ ಸೀಟಿನಲ್ಲಿದ್ದ ಮಕ್ಕಳು ಹಾಗೂ ಮಹಿಳೆಯರಿಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮುಂಬದಿ ಸೀಟು ಹಾಗೂ ಮಧ್ಯದಲ್ಲಿ ಕುಳಿತಿದ್ದವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದೆ.

ಇಬ್ಬರು ವಿದ್ಯಾರ್ಥಿಗಳು ಸಾವು

ಈ ಮಧ್ಯೆ **–3ನೇ ಪುಟಕ್ಕೆ**

## ಒಂದು ದಿನ ಮುನ್ನವೇ ದರ್ಶನ್,ಸಹಚರರು ಕೋರ್ಟಿಗೆ




ಬೆಂಗಳೂರು;–
ಚಿತ್ರದುರ್ಗದ ರೇಣುಕಾ ಸ್ವಾಮಿಯನ್ನು ಅಪಹರಿಸಿ ಕೊಲೆಗೈದ ಪ್ರಕರಣದಲ್ಲಿ ಬಂಧಿತರಾಗಿ ಕಸ್ಟಡಿಯಲ್ಲಿರುವ ನಟ ದರ್ಶನ್, ಅವರ ಆಪ್ತೆ ಪವಿತ್ರಾಗೌಡ ಸೇರಿ 17 ಮಂದಿ ಆರೋಪಿಗಳನ್ನು ಇಂದೇ ನ್ಯಾಯಾಲಯಕ್ಕೆ ಹಾಜರು ಪಡಿಸುವ ಸಾಧ್ಯತೆ ಇದೆ.

ಜೂನ್ 11ರಿಂದ ಜೂನ್ 17ರ ವರೆಗೆ ದರ್ಶನ್ ಮತ್ತು ಪವಿತ್ರಾ ಗೌಡ ಅವರನ್ನು ಕಸ್ಟಡಿಗೆ ಪಡೆದಿದ್ದ ಪೊಲೀಸರು ಜೂನ್ 17ರಂದು ಸರ್ಕಾರಿ ರಜೆ ಇರುವುದರಿಂದ ಪೊಲೀಸರು ಒಂದು ದಿನದ ಮೊದಲೇ ನ್ಯಾಯಾಲಯಕ್ಕೆ ಆರೋಪಿಗಳನ್ನು ಹಾಜರು ಪಡಿಸಲಿದ್ದಾರೆ.

ಕೊಲೆ ಕೃತ್ಯದ ಸಂಬಂಧ ಸ್ಥಳ ಮಹಜರು, ವಿಚಾರಣೆ ಹಾಗೂ ಸಾಕ್ಷಾಧಾರ ಕಲೆ ಹಾಕುವ ಕಾರ್ಯವನ್ನು ಬಹುತೇಕ ಪೂರ್ಣಗೊಳಿಸಿರುವ **–3ನೇ ಪುಟಕ್ಕೆ**

## ಗುಂಡಿಕ್ಕಿ 8 ನಕ್ಸಲೀಯರ ಹತ್ಯೆ ಪ್ರತಿ ದಾಳಿಯಲ್ಲಿ ಯೋಧ ಹುತಾತ್ಮ



ನಾರಾಯಣಪುರ:–
ಛತ್ತೀಸ್ ಘಡದ ನಾರಾಯಣಪುರ ಜಿಲ್ಲೆಯಲ್ಲಿ ಪೊಲೀಸರು ಮತ್ತು ಮಾವೋವಾದಿಗಳ ನಡುವೆ ನಡೆದ ಇಂದು ಬೆಳಗ್ಗೆ ನಡೆದ ಗುಂಡಿನ ಕಾಳಗದಲ್ಲಿ ಎಂಟು ಮಾವೋವಾದಿಗಳು ಹತ್ಯೆಯಾಗಿದ್ದಾರೆ. ಸೈನಿಕರೋರ್ವ ಹುತಾತ್ಮರಾಗಿದ್ದಾರೆ.ನಾರಾಯಣಪುರ ಜಿಲ್ಲೆಯಲ್ಲಿ ಪೊಲೀಸರು ಮತ್ತು ಮಾವೋವಾದಿಗಳ ನಡುವೆ ನಡೆದ ಭೀಕರ ಕಾಳಗದಲ್ಲಿ 8 ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಭದ್ರತಾ ಪಡೆಯ ಮೂಲಗಳು ತಿಳಿಸಿವೆ.ನಕ್ಸಲೀಯರ ರಾಜಧಾನಿ ಎಂದೇ ಕರೆಯಲ್ಪಡುವ ಪ್ರದೇಶವಾದ ಕುತುಲ್, ಫರ್ಸಬೇಡ, ಕೊಡಮೇಟಾ ಅರಣ್ಯಗಳಲ್ಲಿ ಎನ್ ಕೌಂಟರ್ ನಡೆದಿದೆ. ಮೂಲಗಳ ಪ್ರಕಾರ ಒಬ್ಬ ಯೋಧ ಗಾಯಗೊಂಡಿ–ದ್ದಾರೆ ಎಂದು ಹೇಳಲಾಗಿದೆ.ಸ್ಥಳದಲ್ಲಿ ಕೊಂಡಗಾಂವ ನಾರಾಯಣಪುರ, ದಾಂತೇವಾಡ, ಕಂಕೇರ್ ಐಟಿಬಿಪಿ, ಡಿಆಜಿ ಹಾಗೂ ಜಿಲ್ಲಾ ಪಡೆ ಸಿಬ್ಬಂದಿಗಳ ಕಾರ್ಯಚರಣೆ ನಡೆಯುತ್ತಿದೆ. ಎರಡು ದಿನಗಳಿಂದ ಆ ಪ್ರದೇಶದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆ ಆರಂಭಿಸಲಾಗಿದೆ ಎಂದು ಭದ್ರತಾ ಪಡೆಗಳು ತಿಳಿಸಿವೆ.ಛತ್ತೀಸ್‌ಗಢದ ಉಪ ಮುಖ್ಯಮಂತ್ರಿ ವಿಜಯ್ ಶರ್ಮಾ ಪ್ರತಿಕ್ರಿಯೆನೀಡಿ ಮಾವೋವಾದದ ಕರಾಳ ಛಾಯೆ ಛತ್ತೀಸ್‌ಗಢದಿಂದ ಶೀಘ್ರದಲ್ಲೇ ಅಂತ್ಯವಾಗಲಿದೆ, ಜೂನ್ 13 ರವರೆಗೆ 128 ನಕ್ಸಲೀಯರನ್ನು ಹತ್ಯೆ ಮಾಡಲಾಗಿದೆ 503 ನಕ್ಸಲೀಯರನ್ನು ಬಂಧಿಸಲಾಗಿದೆ ಮತ್ತು 437 ನಕ್ಸಲೀಯರು ಶರಣಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.ಬಸ್ತಾರ್ ನ ನಕ್ಸಲ್ ಪೀಡಿತ ಗ್ರಾಮಗಳು ಸರ್ಕಾರದ "ನಿಯಾದ್ ನೆಲ್ಲನಾರ್ ಯೋಜನೆ"ಯಿಂದ ಸೌಲಭ್ಯಗಳನ್ನು ಪಡೆಯುತ್ತಿವೆ. ಮೂಲ ಸೌಕರ್ಯಗಳ ಜತೆಗೆ ಮೂಲಸೌಕರ್ಯ ಅಭಿವೃದ್ಧಿಯ ಲಾಭವನ್ನು ಗ್ರಾಮಸ್ಥರು ಪಡೆಯುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.ಕಳೆದ ಎರಡೂವರೆ ದಶಕಗಳನ್ನು ಭಯೋತ್ಪಾದನೆಯ ನೆರಳಿನಲ್ಲಿ ಕಳೆದ ನಂತರ, ಜಾಗರಗುಂದ, ಅರನ್‌ಪುರ, ಬೇದ್ರೆ, ಸಿಲ್ಗರ್, ಚಿಂತಲ್ನಾರ್, ತಡಮೆಟ್ಲಾ, ತಾರೆಮ್ ಪ್ರದೇಶಗಳ ಪರಿಸ್ಥಿತಿ ಮತ್ತು ಚಿತ್ರಣದಲ್ಲಿ ದೊಡ್ಡ ಬದಲಾವಣೆ ಕಾಣಿಸಿಕೊಳ್ಳಲು ಪ್ರಾರಂಭಿಸಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಶಾಸಕ ಸ್ಥಾನಕ್ಕೆ ಎಚ್‌ಡಿಕೆ ರಾಜೀನಾಮೆ



ಕೇಂದ್ರ ಸಚಿವ ಹೆಚ್.ಡಿ.ಕುಮಾರ್ ಸ್ವಾಮಿ ಅವರು ವಿಧಾನಸಭೆ ಚುನಾವಣೆಯಲ್ಲಿ ಆಯ್ಕೆಯಾಗಿದ್ದ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ತಮ್ಮ ರಾಜೀನಾಮೆ ಪತ್ರವನ್ನು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ರವರಿಗೆ ಸಲ್ಲಿಸಿದರು. ಶಾಸಕ ಜಿ.ಟಿ. ದೇವೇಗೌಡ, ವಿಧಾನ ಪರಿಷತ್ ಸದಸ್ಯ ಭೋಜೇಗೌಡ ಮತ್ತಿತರರು ಇದ್ದರು.

ಬೆಂಗಳೂರು;–
ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರು ಇಂದು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದರು. ರಾಜ್ಯ ವಿಧಾನಸಭೆಗೆ ಚನ್ನಪಟ್ಟಣ ಕ್ಷೇತ್ರದಿಂದ ಕುಮಾರಸ್ವಾಮಿ ಆಯ್ಕೆಯಾಗಿದ್ದರು. ಲೋಕಸಭಾ ಚುನಾವಣೆಯಲ್ಲಿ ಮಂಡ್ಯದಿಂದ ಆಯ್ಕೆಯಾಗಿರುವ ಅವರು, ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದರು.

ತಿರುಪತಿಯಿಂದ ಹಿಂದಿರುಗಿದ ಬಳಿಕ ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಅವರನ್ನು ವಿಧಾನಸೌಧದಲ್ಲಿಂದು ಸಭಾಧ್ಯಕ್ಷರನ್ನು ಭೇಟಿ ಮಾಡಿ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು.

ತಿರುಪತಿಯಲ್ಲಿ ವಿಶೇಷ ಪೂಜೆ

ಕೇಂದ್ರ ಸಚಿವರಾದ ಮೇಲೆ ನಿನ್ನೆಯಷ್ಟೆ ಬೆಂಗಳೂರಿಗೆ ಆಗಮಿಸಿದ ಕುಮಾರಸ್ವಾಮಿ ಅವರು ತಿರುಪತಿಗೆ ತೆರಳಿದ್ದು, ಇಂದು ಬೆಳಿಗ್ಗೆ ತಿರುಮಲದ ವೆಂಕಟೇಶ್ವರಸ್ವಾಮಿ ದೇವಸ್ಥಾನಕ್ಕೆ ತೆರಳಿ **–3ನೇ ಪುಟಕ್ಕೆ**

## ಮೆಲೋನಿ ಜೊತೆ ಮೋದಿ ಸೆಲ್ಫಿ



ನವದೆಹಲಿ:–
ಇಟಲಿಯಲ್ಲಿ ನಡೆಯುತ್ತಿರುವ ಜಿ–7 ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರು ಮತ್ತೊಮ್ಮೆ ಸೆಲ್ಫಿ ಕ್ಲಿಕ್ಕಿಸಿಕೊಂಡು "ಮೆಲೋಡಿ ಕ್ಷಣ"ಕ್ಕೆ ಸಾಕ್ಷಿಯಾಗಿದ್ದಾರೆ. **–3ನೇ ಪುಟಕ್ಕೆ**

## ಶಾಸಕ ಸ್ಥಾನಕ್ಕೆ ಬೊಮ್ಮಾಯಿ ರಾಜೀನಾಮೆ



ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದರಾಗಿ ಆಯ್ಕೆಯಾಗಿರುವ ಬಸವರಾಜ ಬೊಮ್ಮಾಯಿರವರು ಶಿಗ್ಗಾವಿ ಕ್ಷೇತ್ರದ ಶಾಸಕ ಸ್ಥಾನದ ರಾಜೀನಾಮೆ ಪತ್ರವನ್ನು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್‌ರವರಿಗೆ ಸಲ್ಲಿಸಿದರು. ವಿಪಕ್ಷ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಸದಸ್ಯರುಗಳಾದ ರವಿಕುಮಾರ್, ಎಂ.ಜಿ. ಮುಳೆ ಮತ್ತಿತರರು ಇದ್ದಾರೆ.

ಬೆಂಗಳೂರು:–
ಹಾವೇರಿ–ಗದಗ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿರುವ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಇಂದು ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ವಿಧಾನಸೌಧದಲ್ಲಿಂದು ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಅವರನ್ನು ಭೇಟಿ ಮಾಡಿದ ಬಸವರಾಜ ಬೊಮ್ಮಾಯಿ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವ ಪತ್ರವನ್ನು ಸಲ್ಲಿಸಿದರು.

ಬಸವರಾಜ ಬೊಮ್ಮಾಯಿ ಅವರು ಹಾವೇರಿ ಜಿಲ್ಲೆಯ ಶಿಗ್ಗಾಂವ್ ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿದ್ದರು.ಲೋ **–3ನೇ ಪುಟಕ್ಕೆ**

## ನೀಟ್ ಲೋಪವಾಗಿದ್ದರೆ ಸರಿಪಡಿಸುತ್ತೇವೆ



ನವದೆಹಲಿ:–
ನೀಟ್–ಯುಜಿ ಪರೀಕ್ಷೆಯ ಬಗ್ಗೆ ಲೋಪಗಳು ಕಂಡುಬಂದರೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್ಟಿಎ) ಉತ್ತರದಾಯಿತ್ವವನ್ನು ಸರಿಪಡಿಸಲಾಗುವುದು ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.ಪರೀಕ್ಷೆಗಳ ನಿರ್ವಹಣೆಯಲ್ಲಿ ಯಾವುದೇ ದುಷ್ಕೃತ್ಯಗಳು ಅಥವಾ ಅಕ್ರಮಗಳನ್ನು ಸರ್ಕಾರ ಸಹಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.ಪ್ರತಿಯೊಂದು ಅಂಶವನ್ನು ಪರಿಶೀಲಿಸಲಾಗುತ್ತಿದೆ. ಉತ್ತರದಾಯಿತ್ವವನ್ನು ವ್ಯಾಖ್ಯಾನಿಸಲಾಗುವುದು ಮತ್ತು ಲೋಪದ ಸ್ವರೂಪವನ್ನು ಅವಲಂಬಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.ಪರೀಕ್ಷಾರ್ಥಿಗಳ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರ ಬದ್ಧವಾಗಿದೆ. ವಿದ್ಯಾರ್ಥಿಗಳ ಕಳವಳಗಳನ್ನು ನ್ಯಾಯಯುತ ಮತ್ತು ಸಮಾನತೆಯಿಂದ ಪರಿಹರಿಸಲಾಗುವುದು. ನೀಟ್–ಯುಜಿ ಪರೀಕ್ಷೆಗೆ ಸಂಬಂಧಿಸಿದ ಸಂಗತಿಗಳು ಸುಪ್ರೀಂ ಕೋರ್ಟ್ನ ಗಮನಕ್ಕೆ ಬಂದಿವೆ. ನೀಟ್–ಯುಜಿಯ ಕೌನ್ಸೆಲಿಂಗ್ ಪ್ರಕ್ರಿಯೆ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಮತ್ತು ಯಾವುದೇ ಗೊಂದಲವಿಲ್ಲದೆ ಈ ದಿಕ್ಕಿನಲ್ಲಿ **–3ನೇ ಪುಟಕ್ಕೆ**

## ಎನ್‌ಡಿಎ ಸರ್ಕಾರ ಶೀಘ್ರ ಪತನ: ಖರ್ಗೆ



ನವದೆಹಲಿ:–
ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಆಕಸ್ಮಿಕ ಹಾಗೂ ತಪ್ಪಾಗಿ ರಚನೆಯಾಗಿದ್ದು, ಈ ಸರ್ಕಾರ ಬಹಳ ದಿನ ಉಳಿಯಲ್ಲ. ಆದಷ್ಟು ಬೇಗ ಪತನವಾಗುತ್ತದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭವಿಷ್ಯ ನುಡಿದಿದ್ದಾರೆ.ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರಮೋದಿ ಅವರಿಗೆ ಜನಾದೇಶ ಇಲ್ಲ. ಇದು ಅಲ್ಪಸಂಖ್ಯಾತ ಸರ್ಕಾರ. ಯಾವಾಗ ಬೇಕಾದರೂ ಉರುಳಬಹುದು. ಎನ್‌ಡಿನ ದೊಡ್ಡ ಪಕ್ಷವಾಗಿರುವ ಬಿಜೆಪಿ ಮೈತ್ರಿ ಉಳಿಸಿಕೊಳ್ಳಲಿ ಹೆಣಗಾಡುತ್ತಿದೆ. ಎಷ್ಟು ದಿನ ಈ ಸರ್ಕಾರ ಇರಲಿದೆ ಎಂಬುದನ್ನು ಖಾತ್ರಿಯಾಗಿ ಹೇಳಲು ಬರುವುದಿಲ್ಲ. ನನ್ನ ಪ್ರಕಾರ ಈ ಸರ್ಕಾರಕ್ಕೆ ಹೆಚ್ಚು ಆಯಸ್ಸು ಇಲ್ಲ ಎಂದರು.ಇಂಡಿಯಾ ಮೈತ್ರಿಕೂಟದ ನಾಯಕರು ಒಗ್ಗಟ್ಟಾಗಿದ್ದೇವೆ.

ಆದರೆ ಎನ್ ಡಿಎ ಸರ್ಕಾರ ನಡೆಸಲು ಮಿತ್ರ ಪಕ್ಷಗಳೇ ಬಿಡುವುದಿಲ್ಲ ದೇಶವನ್ನು ಬಲಪಡಿಸಲು ಸದಾ ಸಹಕರಿಸುತ್ತೇವೆ ಎಂದು ಹೇಳಿದ್ದಾರೆ.

ನಾವಾಗಿಯೇ ಎನ್‌ಡಿಎ ಮೈತ್ರಿಕೂಟವನ್ನು ಅಲುಗಾಡಿಸುವ ಪ್ರಯತ್ನ ಮಾಡುವುದಿಲ್ಲ ಆದರೆ ಅವರಲ್ಲಿಯೇ ಭಿನ್ನಾಭಿಪ್ರಾಯ ತಲೆ ದೋರಿ ಸರ್ಕಾರ ಪತನವಾಗಲಿದೆ. ಅದು ಎಷ್ಟು ದಿನ ಇರಲಿದೆ ಎನ್ನುವುದನ್ನು ನಿಖರವಾಗಿ ಹೇಳಲು ಸಾಧ್ಯವಿಲ್ಲ ಎಂದಿದ್ದಾರೆ.

ಜೆಡಿಯು ತಿರುಗೇಟು

ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ರಚನೆ ಆಗಿರುವ ಸರ್ಕಾರ ಪೂರ್ಣಾವಧಿ ಪೂರೈಸಲಿದೆ ಎಂದು ಜೆಡಿಯೂ ವಿಧಾನ ಪರಿಷತ್ ಸದಸ್ಯ ನೀರಜ್ ಕುಮಾರ್ ಹೇಳಿದ್ದಾರೆ.

1991 ರ ಸಾರ್ವತ್ರಿಕ ಚುನಾವಣೆಯಲ್ಲಿ, 2024 ರಲ್ಲಿ ಬಿಜೆಪಿ ಗೆದ್ದಷ್ಟೇ ಸಂಖ್ಯೆಯಲ್ಲಿ ಕಾಂಗ್ರೆಸ್ ಅದೇ ಸಂಖ್ಯೆಯ ಸ್ಥಾನಗಳನ್ನು ಗೆದ್ದುಕೊಂಡಿತು.

ಯಾವುದೇ ಪಕ್ಷ ಬಹುಮತವನ್ನು ಪಡೆಯಲು ಸಾಧ್ಯವಾಗದಿದ್ದಾಗ, ಪ್ರಧಾನಿ ನರಸಿಂಹ ರಾವ್ ನೇತೃತ್ವದಲ್ಲಿ ಕಾಂಗ್ರೆಸ್ ಅಲ್ಪಸಂಖ್ಯಾತ ಸರ್ಕಾರ ರಚಿಸಿತ್ತು ಕಾಂಗ್ರೆಸ್ ಪಕ್ಷವು ಸರ್ಕಾರ ರಚಿಸುವಲ್ಲಿ ಯಶಸ್ವಿಯಾಗಲಿಲ್ಲವೇ ಎಂದು ಹೇಳಿದ್ದಾರೆ.

ಇತ್ತೀಚೆಗೆ ಮುಕ್ತಾಯಗೊಂಡ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಒಟ್ಟು 240 ಸ್ಥಾನ ಗಳಿಸಿ ಮಿತ್ರಪಕ್ಷಗಳ ಸಹಾಯ ಮೇಲೆ ಅವಲಂಬಿತವಾಗಿದೆ.

# ಡಾಲಿ ಮಾಸ್ ಗೂ ಸೈ- ಕ್ಲಾಸ್ ಗೂ ಜೈ; ನಿಯತ್ತು- ಪ್ರಾಮಾಣಿಕತೆಯೇ ಹೈಲೈಟ್-ಕೊಂಚ ತಾಳ್ಮೆ ಬೇಡುವ ಚಿತ್ರ!

ಕನ್ನಡ ಮನರಂಜನಾ ವಾಹಿನಿಯಲ್ಲಿ ಹಲವು ವರ್ಷಗಳ ಕಾಲ ಅತ್ಯಂತ ಯಶಸ್ವಿಯಾಗಿ ಸೇವೆ ಸಲ್ಲಿಸಿರುವ ಪರಮೇಶ್ವರ್ ಗುಂಡ್ಕಲ್ ಚೊಚ್ಚಲ ಬಾರಿಗೆ ಕೋಟಿ ಸಿನಿಮಾ ನಿರ್ದೇಶನ ಮಾಡಿದ್ದಾರೆ. ಸಾಕಷ್ಟು ನಿರೀಕ್ಷೆಯೊಂದಿಗೆ ಸಿನಿಮಾ ತಯಾರು ಮಾಡಿದ್ದಾರೆ.

ಡಾಲಿ ಧನಂಜಯ ನಟನೆಯ ಕೋಟಿ ಸಿನಿಮಾಜದಲ್ಲಿ ಪರಮೇಶ್ವರ್ ಮಧ್ಯಮ ವರ್ಗದ ಜನರ ನಿಯತ್ತಿನ ಬದುಕು, ಆರ್ಥಿಕ ಜಂಜಾಟ- ತೊಳಲಾಟ ತೆರೆದಿಡುವ ಪ್ರಯತ್ನ ಮಾಡಿದ್ದಾರೆ. ಜನತಾ ನಗರದಲ್ಲಿ ಕೋಟಿ (ಧನಂಜಯ) ತನ್ನ ತಾಯಿ(ತಾರಾ), ಸಹೋದರ(ಪೃಥ್ವಿ ಶಾಮನೂರು) ಮತ್ತು ಸಹೋದರಿ(ತನುಜಾ) ಬದುಕುವಾತ. ಬ್ಯಾಂಕ್ ಸಾಲ, ರೆಫ್ರಿಜರೇಟರ್ ಖರೀದಿಯಂತಹ ಹಣಕಾಸಿನ ವೆಚ್ಚಗಳನ್ನುಎಚ್ಚರಿಕೆಯಿಂದ ನಿಭಾಯಿಸುವ ಮಧ್ಯಮ ವರ್ಗದ ಬದುಕು ಆತನದ್ದು. ಡಾನ್ ದಿನೂ ಸಾವ್ಕಾರ್ (ರಮೇಶ್ ಇಂದಿರಾ) ನಿಂದ ಟ್ರಕ್ ಬಾಡಿಗೆಗೆ ಪಡೆದು ಸಣ್ಣ ಮೂವರ್ಸ್ ಮತ್ತು ಪ್ಯಾಕರ್ಸ್ ಬಿಸ್ನೆಸ್ ನಡೆಸುತ್ತಾನೆ. ಈ ಬಿಸ್ನೆಸ್ ಇಲ್ಲದೆ ಇರುವಾಗ ಕ್ಯಾಬ್ ಡ್ರೈವರ್ ಆಗಿಯೂ ದುಡಿಯುತ್ತಾನೆ. ಮೂವರ್ಸ್ ಮತ್ತು ಪ್ಯಾಕರ್ಸ್ ಲಾರಿ ಓಡಿಸಿಕೊಂಡು ಹಣ ಸಂಪಾದಿಸುವ ಕೋಟಿಗೆ ತನ್ನದೆ ಆದ ಕ್ಯಾಬ್ ಹೊಂದುವ ಮಹಾದಾಸೆ ಇರುತ್ತದೆ.

ಕೋಟಿ ಪ್ರಾಮಾಣಿಕತೆಯ ಬಗ್ಗೆ ಹೆಮ್ಮೆ ಪಡುವ ದಿನೂ ಸಾಹುಕಾರ ತನ್ನ ವೈಯಕ್ತಿಕ ಲಾಭಕ್ಕಾಗಿ ಆತನನ್ನು ದುರ್ಬಳಕೆ ಮಾಡಲು ಪ್ರಯತ್ನಿಸುತ್ತಾನೆ. ದೀನೂ ಸಾಹುಕಾರನಿಂದ ಪಡೆದ ಸಾಲವೇ ಕೋಟಿಗೆ ಶೂಲವಾಗುತ್ತದೆ. ಸಾಹುಕಾರನಿಂದ ಪಡೆದ ಹಣವನ್ನು ಕೋಟಿ ವಾಪಸ್



ಹೇಗೆ ನೀಡುತ್ತಾನೆ, ಪ್ರಾಮಾಣಿಕನಾಗಿರುವ ಕೋಟಿಗೆ ಕೋಟ್ಯಾಧೀಶ್ವರ ಆಗೋ ಬಯ-ಕೆ. ಅದು ಸಾಧ್ಯವಿಲ್ಲ ಎಂದು ಎಲ್ಲರೂ ಹೇಳಿದರೆ ಅದನ್ನು ಒಪ್ಪೋಕೆ ಆತ ರೆಡಿ ಇಲ್ಲ. ಕೊನೆಯಲ್ಲಿ ಕೋಟಿ ಹಣ ಮಾಡುತ್ತಾನಾ? ಪ್ರಾಮಾಣಿಕತೆ ಬಿಟ್ಟು ಕೆಟ್ಟ ಹಾದಿ ಹಿಡಿಯುತ್ತಾನಾ? ಅನ್ನೋ ಕುತೂಹಲಕ್ಕೆ ಸಿನಿಮಾದಲ್ಲಿ ಉತ್ತರ ಕಂಡುಕೊಳ್ಳಬೇಕು.

**ಕೋಟಿ ಸಿನಿಮಾ ಸ್ಟಿಲ್**

ಪರಮ್ ನಿರ್ದೇಶನದ 'ಕೋಟಿ' ಸಿನಿಮಾ ಘೋಷಣೆ; ಡಾಲಿ ಧನಂಜಯ್ ನಾಯಕ, ಪೋಸ್ಟರ್ ಬಿಡುಗಡೆ

ನಾಯಕಿಯಾಗಿ ಮೋಕ್ಷ ಕುಶಾಲ್ ನವಮಿ ಪಾತ್ರದಲ್ಲಿ ಉತ್ತಮವಾಗಿ ನಟಿಸಿದ್ದಾರೆ. ಚಾರ್ಟರ್ಡ್ ಅಕೌಂಟೆಂಟ್ ಪಾತ್ರದಲ್ಲಿ ಗಮನ ಸೆಳೆಯುತ್ತಾರೆ. ಕ್ಯಾಬ್ ರೈಡ್ ಮೂಲಕ ಪರಿಚಯವಾಗುವ ನವಮಿ ಕೋಟಿಯ ಜೀವನದಲ್ಲಿ ಸಿಕ್ಕಿಹಾಕಿಕೊಳ್ಳುತ್ತಾರೆ. ಸಾಲ ತೀರಿಸಲು ಕೋಟಿ ತನ್ನ ಕಳೆದು ಹೋದ ಜೀವನ ಘನತೆಯನ್ನು ಮರಳಿ ಪಡೆಯುವ ಸಂಕಲ್ಪ ಪ್ರೇಕ್ಷಕರ ಗಮನ ಸೆಳೆಯುತ್ತದೆ. ಒಮ್ಮೆ ಜೀವನದ ಸವಾಲುಗಳನ್ನು ಧಿಕ್ಕರಿಸಿದ ಕೋಟಿ ತನ್ನ ಹೋರಾಟಗಳನ್ನು ನೇರವಾಗಿ ಎದುರಿಸುತ್ತಾನೆ. ಆ

ಮೂಲಕ ಧನಂಜಯ್ ಕಾಮನ್ ಮ್ಯಾನ್ ನ ಕಥೆಯಲ್ಲಿ ಸಹಜಾಭಿನಯದ ಮೂಲಕ ಇಷ್ಟವಾಗುತ್ತಾರೆ. ಡಾಲಿ ಕೋಟಿಯ ಪಾತ್ರದಲ್ಲಿ ಜೀವಿಸಿದ್ದಾರೆ. ಮಧ್ಯಮ ವರ್ಗದ ಜನತೆಗಿರುವಂತೆ ಕೋಟಿಗಿರುವ ಕನಸುಗಳು ನೈಜತೆಗೆ ಹತ್ತಿರವಾದವು ಎನ್ನಿಸುತ್ತದೆ. ಧನಂಜಯ ಮತ್ತು ರಮೇಶ್ ಇಂದಿರಾ ಅವರ ಕಾರಣದಿಂದ ಚಿತ್ರ ಬೇಸರ ತರಿಸದು. ಸಿನಿಮಾದಲ್ಲಿ ಉತ್ತಮ ನಿರೂಪಣೆ, ಹದವಾದ ಹಾಸ್ಯ, ಸೆಂಟಿಮೆಂಟ್ ಬೆರೆಸುವಲ್ಲಿ ಪರಮೇಶ್ವರ್ ಸಾಕಷ್ಟು ಕೆಲಸ ಮಾಡಿದ್ದಾರೆ. ಚೊಚ್ಚಲ ಸಿನಿಮಾವನ್ನು ಕುಶಲತೆಯಿಂದ ಕಟ್ಟಿ ಪ್ರೇಕ್ಷಕನಿಗೆ ಮನರಂಜನೆ ಉಣಬಡಿಸಲು ಸಾಕಷ್ಟು ಪ್ರಯತ್ನಿಸಿದ್ದಾರೆ.

ಸಿನಿಮಾದ ಮೊದಲಾರ್ಧ ಸ್ವಲ್ಪ ಮಂದಗತಿಯಲ್ಲಿ ಸಾಗುತ್ತದೆ, ಚಿತ್ರದ ದ್ವಿತೀಯಾರ್ಧದಲ್ಲಿ ಕೆಲ ಅನಿರೀಕ್ಷಿತ ತಿರುವುಗಳು ಕಂಡು ಬರುತ್ತವೆ. ಕೆಲವು ಹಾಡುಗಳು ಗಮನ ಸೆಳೆಯುತ್ತವೆ, ಎಂದಿನಂತೆ ರಮೇಶ್ ಇಂದಿರಾ ಖಳನಾಯಕನ ಪಾತ್ರದಲ್ಲಿ ಖಡಕ್ ಡೈಲಾಗ್ ಹೊಡೆದು ಚಪ್ಪಾಳೆ ಗಿಟ್ಟಿಸುತ್ತಾರೆ. ಭಾವನಾತ್ಮಕ ದೃಶ್ಯಗಳಲ್ಲಿ ನಟಿ ತಾರಾ ಮನೋಜ್ಞವಾಗಿ ಅಭಿನಯಿಸಿದ್ದಾರೆ. ಚಿಕ್ಕ ಕಡಿಮೆ ಸಮಯದಲ್ಲಿ ರಂಗಾಯಣ ರಘು ತಮ್ಮ ನಟನೆಯ ಮೂಲಕ ಆವರಿಸಿಕೊಳ್ಳುತ್ತಾರೆ. ಇನ್ನೂ ಕೋಟಿಯ ಒಡ ಹುಟ್ಟಿದವರ ಪಾತ್ರದಲ್ಲಿ ತನುಜಾ ಮತ್ತು ಪೃಥ್ವಿ ನಟನೆ ಓ.ಕೆ ಅನ್ನಿಸುವಂತಿದೆ. ವಾಸುಕಿ ವೈಭವ್ ಅವರ ಸಂಗೀತ ಮತ್ತು ನೋಬಿನ್ ಪಾಲ್ ಹಿನ್ನೆಲೆ ಸಂಗೀತವು ಸಿನಿಮಾ ಕಥೆಗೆ ಪೂರಕವಾಗಿದೆ. ಅರುಣ್ ಬ್ರಹ್ಮಾವರ ಛಾಯಾಗ್ರಹಣ ಅತ್ಯುತ್ತಮವಾಗಿದೆ.

ಪರಮೇಶ್ವರ್ ಗುಂಡ್ಕಲ್ ಅವರ ಧಾರಾವಾಹಿ ಹಿನ್ನೆಲೆ ಕೋಟಿ ಸಿನಿಮಾದ ಮೇಲೆ ಪ್ರಭಾವ ಬೀರಿದೆ, ಚಿತ್ರಕಥೆ ಅಲ್ಲಿಲ್ಲಿ ಎಳೆದಾಡಿದಂತೆ ಕಾಣುತ್ತದೆ, ಮಂದಗತಿಯ ನಿರೂಪಣೆ ಪ್ರೇಕ್ಷಕನ ತಾಳ್ಮೆ ಬೇಡುತ್ತದೆ. ಕುಟುಂಬಕ್ಕಾಗಿ ಯಾವುದೇ ಅತಿರೇಕಕ್ಕೆ ಹೋಗಲು ಸಿದ್ಧವಿರುವ ವ್ಯಕ್ತಿಯ ಕಥೆಯನ್ನಾಧರಿಸಿ ಈ ಹಿಂದೆ ಹಲವು ಕಥೆಗಳು ಬಂದಿವೆ, ಅದರಲ್ಲಿ ಕೋಟಿ ಸ್ವಲ್ಪ ಭಿನ್ನವಾಗಿರುವಂತೆ ಕಂಡರೂ ಕೆಲವೊಮ್ಮೆ ಅತಿಶಯೋಕ್ತಿ ಎಂಬಂತೆ ಭಾಸವಾಗುತ್ತದೆ. ಒಟ್ಟಾರೆ ಸಿನಿಮಾದಲ್ಲಿ ಕೋಟಿಯ ಪ್ರಾಮಾಣಿಕತೆಯೇ ಹೈಲೈಟ್ ಆಗಿದೆ. ಕೆಲವು ದೃಶ್ಯಗಳನ್ನು ಇನ್ನಷ್ಟು ಹದವಾಗಿ ಕಟ್ಟಿಕೊಡಬಹುದಾಗಿತ್ತು. ಒಟ್ಟಾರೆ ಕೋಟಿ ಮಧ್ಯಮ ವರ್ಗಗಳಿಗೆ ಆಪ್ತವೆನಿಸುವ ಕೌಟುಂಬಿಕ ಕಥೆಯಾಗಿದೆ.

## ಬಿ-ಟೌನ್‌ನ 'ಸುಸಂಸ್ಕೃತ ತಂದೆ' ಅಲೋಕ್ ನಾಥ್ ತನ್ನ 'ಸೊಸೆ'ಯನ್ನೇ ಪ್ರೀತಿಸುತ್ತಿದ್ದರು!





ಬಾಲಿವುಡ್‌ನ ಕಾರಿಡಾರ್‌ಗಳಲ್ಲಿ ನಮ್ಮ ಹುಬ್ಬುಗಳನ್ನು ಏರಿಸುವ ಅಂತಹ ಕಥೆಗಳಿಗೆ ಕೊರತೆಯೇನಿಲ್ಲ. ಅದು ಅಫೇರ್ ಆಗಿರಲಿ, ಬ್ರೇಕ್ ಅಪ್ ಆಗಿರಲಿ ಅಥವಾ ಹುಚ್ಚು ಧೈರ್ಯವಾಗಿರಲಿ ..ಆದರೆ ಬಿ-ಟೌನ್‌ನಲ್ಲಿ ತನ್ನ 'ಸೊಸೆ'ಯನ್ನೇ ಪ್ರೀತಿಸಿದ ಮಾವನಿದ್ದಾನೆ ಎಂದು ನಿಮಗೆ ಹೇಳಿದರೆ ನೀವು ಏನು ಹೇಳುತ್ತೀರಿ.?!

ಫಿಲ್ಮ್ 'ಹಮ್ ಆಪ್ಕೆ ಹೈ ಕೌನ್' ಮತ್ತು 'ಹಮ್ ಸಾಥ್ ಸಾಥ್ ಹೈ' ಚಿತ್ರಗಳಲ್ಲಿ ಅತ್ಯುತ್ತಮವಾದ ತಂದೆಯ ಪಾತ್ರವನ್ನು ನಿರ್ವಹಿಸಿದ್ದ ನಟ ಅಲೋಕ್ ನಾಥ್ ಬಗ್ಗೆ ಈ ಆರೋಪ!

'ಸುಸಂಸ್ಕೃತ ತಂದೆ' ಎಂದು ಬಾಲಿವುಡ್ ನಲ್ಲಿ ಗುರುತಿಸಿಕೊಂಡವರು ಅಲೋಕ್ ನಾಥ್. ತಮ್ಮ ನಟನೆಯಿಂದಲೇ ವಿಶೇಷವಾದ ಗುರುತನ್ನು ಮೂಡಿಸಿರುವ ನಟ. ಪ್ರಮುಖ ಪಾತ್ರದಲ್ಲಿ ಕಾಣಿಸದಿದ್ದರೂ ಅಪ್ಪನ ಪಾತ್ರದಲ್ಲಿ ನಟಿಸಿ ಯಾವುದೇ ಸಿನಿಮಾದ ಗಮನ ಸೆಳೆಯುವುದರಲ್ಲಿ ಅವರು ನಿಪುಣ-ರು. ನಟ ತಮ್ಮ ವೃತ್ತಿಜೀವನದಲ್ಲಿ ಅನೇಕ ಚಲನಚಿತ್ರಗಳನ್ನು ಮಾಡಿದ್ದಾರೆ ಮತ್ತು ಅವೆಲ್ಲವುಗಳಲ್ಲಿ ಪ್ರಶಂಸೆಯನ್ನು ಗಳಿಸಿದ್ದಾರೆ. ಅವರ ಚಲನಚಿತ್ರ ಜೀವನದಲ್ಲಿ, ನಟ ಕೇವಲ ಧಾರಾವಾಹಿಗಳಲ್ಲಿ ಕೆಲಸ ಮಾಡಲಿಲ್ಲ, ಚಲನಚಿತ್ರಗಳಲ್ಲೂ ಸಂಚಲನವನ್ನು ಸೃಷ್ಟಿಸಿದವರು.

### ಅವರು ತನ್ನ 'ಸೊಸೆ'ಯನ್ನು ಪ್ರೀತಿಸುತ್ತಿದ್ದರು:

ಸಂಸ್ಕಾರಿ ಬೌಜಿ ನಿಜ ಜೀವನದಲ್ಲಿ ತುಂಬಾ ಮುಕ್ತ ಮನಸ್ಸಿನವರು.ಆದರೆ ಅವರ ಒಂದು ಪ್ರಕರಣ ಸಮಸ್ಯೆಗಳನ್ನು ಹೆಚ್ಚಿಸಿತು. ವಾಸ್ತವವಾಗಿ ಇದು ಟಿವಿ ಧಾರಾವಾಹಿ 'ಬುನಿಯಾದ್' ಸಮಯದ ಘಟನೆ. ಇದರಲ್ಲಿ ನಟಿ ನೀನಾ ಗುಪ್ತಾ ತಮ್ಮ ನಟನೆಯಿಂದ ಕೋಲಾಹಲವನ್ನು ಸೃಷ್ಟಿಸಿದ್ದರು. ಅವರು ಧಾರಾವಾಹಿಯಲ್ಲಿ ಅಲೋಕ್ ನಾಥ್ ಅವರ ಸೊಸೆಯ ಪಾತ್ರವನ್ನು ನಿರ್ವಹಿಸಿದ್ದಾರೆ. ವರದಿಯ ಪ್ರಕಾರ ಈ ಧಾರಾವಾಹಿ ಕಾರ್ಯಕ್ರಮದ ಸಮಯದಲ್ಲಿ ಅಲೋಕ್ ನಾಥ್ ಮತ್ತು ನೀನಾ ನಡುವೆ ನಿಕಟತೆ ಹೆಚ್ಚಾಗಲು ಪ್ರಾರಂಭಿಸಿತು.

ಆದರೂ ಅವರ ಪ್ರೀತಿಯು ಅರಳಲು ಸಾಧ್ಯವಾಗಲಿಲ್ಲ ಮತ್ತು ಶೀಘ್ರದಲ್ಲೇ ಅವರಿಬ್ಬರ ಮಾರ್ಗಗಳು ಬೇರ್ಪಟ್ಟವು. ಮಾಧ್ಯಮದ ವರದಿಗಳನ್ನು ನಂಬುವುದಾದರೆ, ನೀನಾಗೆ





ಬೇರೆಡೆ ಸಂಬಂಧವಿದೆ ಎಂಬುದೇ ಅವರ ಪ್ರತ್ಯೇಕತೆಗೆ ಕಾರಣವಾಗಿತ್ತು.

ಧಾರಾವಾಹಿ ಕಾರ್ಯಕ್ರಮ ಮುಗಿಯುವ ಮೊದಲೇ ಅವರ ಸಂಬಂಧ ಕೊನೆಗೊಂಡಿತು.

ಅಲ್ಲಿ ನೀನಾ ಕ್ರಿಕೆಟಿಗ ವಿವಿಯನ್ ರಿಚರ್ಡ್ಸ್ ಜೊತೆ ಸಂಬಂಧ ಹೊಂದಿದ್ದರು ಮತ್ತು ಪ್ರೀತಿಯ ಫಲವಾಗಿ ಅವರು ಮದುವೆಯಾಗದೆ ನಂತರ ಗರ್ಭಿಣಿಯಾಗಿದ್ದರು.


ಇತ್ತ ಅಲೋಕ್ ನಾಥ್ ಅವರು ಜೀವನದಲ್ಲಿ ಮುಂದೆ ಸಾಗಿದರು ಮತ್ತು 1987 ರಲ್ಲಿ ಅಶು ಸಿಂಗ್ ಅವರನ್ನು ವಿವಾಹವಾದರು. ಈಗ ಅವರಿಗೆ ಒಬ್ಬ ಮಗನಿದ್ದಾನೆ, ಮತ್ತು ನೀನಾಗೆ ಒಬ್ಬಳು ಮಗಳಿದ್ದಾಳೆ.

## ಹಳ್ಳಿ ಹೈಕ್ಳ ಪ್ಯಾಟೆ ಕಹಾನಿ

ಹಳ್ಳಿಯ ಯುವಕರು ನಗರಕ್ಕೆ ವಲಸೆ ಹೋಗಿ ನಗರೀಕರಣ ವೈಭವಕ್ಕೆ ಮಾರು ಹೋಗುತ್ತಾರೆ. ಹೀಗೆ ವಿದ್ಯಾವಂತರೆಲ್ಲ ಪಟ್ಟಣ ಸೇರುತ್ತಿದ್ದಾರೆ.ಯುವಕರು ಹಳ್ಳಿಗಳಲ್ಲೇ ಇದ್ದು ಕೆಲಸ ಮಾಡಬೇಕೆನ್ನುವ ಸಂದೇಶ ಇಟ್ಟುಕೊಂಡು ನಿರ್ಮಾಣವಾಗಿರುವ ಚಿತ್ರ ಸಂಭವಾಮಿ ಯುಗೇ ಯುಗೇ. ರಾಜಲಕ್ಷ್ಮಿ ಎಂಟರ್‌ಟೈನ್ಮೆಂಟ್ ಲಾಂಛನದಲ್ಲಿ ಶ್ರೀಮತಿ ಪ್ರತಿಭಾ ಅವರು ನಿರ್ಮಿಸಿರುವ, ಚೇತನ್ ಚಂದ್ರಶೇಖರ್ ಶೆಟ್ಟಿ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಈ ಚಿತ್ರವು ಇದೇ ತಿಂಗಳು 21ರಂದು ಬಿಡುಗಡೆಯಾಗಲಿದೆ.

ಜಯ್ ಶೆಟ್ಟಿ ನಿಶಾ ರಜಪೂತ್ ಹಾಗೂ ಮಧುರಾಗೌಡ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಈ ಚಿತ್ರದ ಪ್ರಚಾರಕ್ಕಾಗಿ ಚಿತ್ರತಂಡ ಅರಮನೆಗಳ ನಗರ ಮೈಸೂರಿಗೆ ಭೇಟಿಕೊಟ್ಟು ಮಾಧ್ಯಮಗಳ ಜೊತೆ ಮಾತನಾಡಿತು.

## ಸಂಭವಾಮಿ ಯುಗೇ ಯುಗೇ




ತಮ್ಮ ನಿರ್ದೇಶನದಲ್ಲಿ ಮೂಡಿಬಂದಿರುವ ಈ ಚಿತ್ರದ ಕುರಿತಂತೆ ಮಾತನಾಡಿದ ಚೇತನ್ ಚಂದ್ರಶೇಖರ್ ಶೆಟ್ಟಿ, ನಾನು ಕಳೆದ ಹತ್ತು ವರ್ಷಗಳಿಂದ ಚಿತ್ರರಂಗದಲ್ಲಿದ್ದು, ಸೋಷಿಯಲ್ ಕಂಟೆಂಟ್ ಇಟ್ಟುಕೊಂಡು ಈ ಚಿತ್ರ ನಿರ್ದೇಶನ ಮಾಡಿದ್ದೇನೆ. ಫ್ಯಾಮಿಲಿ ಆಡಿಯನ್ಸ್ ಕೂತು ನೋಡುವಂಥ ವಿಭಿನ್ನ ಕಮರ್ಷಿಯಲ್ ಕಾನ್ಸೆಪ್ಟ್ ಇರುವ ಈ ಚಿತ್ರಕ್ಕೆ ಚಿತ್ರದಲ್ಲಿ ಕೃಷ್ಣನ ಪಾತ್ರ ಹಾಗೂ ಅರ್ಜುನನನ್ನು ಹೋಲುವ ಪಾತ್ರಗಳೂ ಇವೆ. ಮಂಡ್ಯ, ಚನ್ನಪಟ್ಟಣ, ರಾಮನಗರ ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸಿದ್ದೇವೆ. ಈಗಾಗಲೇ ಚಿತ್ರದ ಟೀಸರ್, ಸಾಂಗ್ಸ್ ವೈರಲ್ ಆಗಿದ್ದು, ಸದ್ಯದಲ್ಲೇ ಟ್ರೈಲರ್ ಬಿಡುಗಡೆ ಮಾಡುತ್ತಿದ್ದೇವೆ.

ಹಳ್ಳಿಯ ಹುಡುಗರು ವಿದ್ಯಾವಂತರಾದ ಮೇಲೆ, ಕೆಲಸದ ನಿಮಿತ್ತ ಪಟ್ಟಣಕ್ಕೆ ಅಂತ ಹೋದವರು ಅಲ್ಲೇ ನೆಲೆಸುತ್ತಾರೆ. ಇದರಿಂದ ಮುಂದಿನ ತಲೆಮಾರಿನ ಕಥೆ ಏನು ? ನಮ್ಮ ಹಳ್ಳಿಗಳು ಉಳಿಯುವುದಾದರೂ ಹೇಗೆ ?, ಹಾಗಾಗಿ ಯುವಕರು ಹಳ್ಳಿಯಲ್ಲೇ ನೆಲೆಸಬೇಕು, ಹಳ್ಳಿಗಳನ್ನು ಬೆಳೆಸಬೇಕು ಎಂಬ ಕಥಾಹಂದರದ ಮೇಲೆ ಈ ಚಿತ್ರ ಮಾಡಿದ್ದೇವೆ. ಜೂನ್ 21ಕ್ಕೆ ಚಿತ್ರವನ್ನು ಬಿಡುಗಡೆ ಮಾಡುವ ಯೋಜನೆಯಿದೆ. ಕಮರ್ಷಿಯಲ್ ಚಿತ್ರವಾದರೂ, ಇವತ್ತಿನ ತಲೆಮಾರಿನವರಿಗೆ ಕನೆಕ್ಟ್ ಆಗುವಂಥ ಹಲವಾರು ಅಂಶಗಳು ನಮ್ಮ ಚಿತ್ರದಲ್ಲಿವೆ ಎಂದು ಹೇಳಿದರು.


ನಾಯಕ ಜಯ್‌ಶೆಟ್ಟಿ ಮಾತನಾಡಿ ಈ ಹಿಂದೆ 1975 ಎಂಬ ಚಿತ್ರದಲ್ಲಿ ಅಭಿನಯಿಸಿದ್ದೆ. ಕೃಷಿ ಮತ್ತು ರೈತರ ಮೇಲೆ ಮಾಡಿದ ಚಿತ್ರವಿದು, ತನಗೆ ಆಶ್ರಯ ಕೊಟ್ಟ ಊರಿಗೆ ಏನಾದರೂ ಮಾಡಬೇಕು ಎಂದು ನಾಯಕ ಮುಂದಾಗುತ್ತಾನೆ. ಮುಂದೇನಾಗುತ್ತದೆ ಎನ್ನುವುದೇ ಈ ಚಿತ್ರದ ಕಾನ್ಸೆಪ್ಟ್ ಎಂದರು.

ನಾಯಕಿ ನಿಶಾ ರಜಪೂತ್ ಮಾತನಾಡುತ್ತ ನಾನು ಬಿಜಾಪುರದವಳಾದರೂ, ಬೆಳೆದಿದ್ದು ಮುಂಬೈನಲ್ಲಿ. ಕನ್ನಡದಲ್ಲಿ ನಟಿಸಬೇಕು ಎಂಬ ಆಸೆ ಇತ್ತು. ಈ ಚಿತ್ರದಲ್ಲಿ ಸ್ವಾತಿ ಎಂಬ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ ಎಂದು ಹೇಳಿದರು, ನಾಯಕನ ತಂಗಿಯ ಪಾತ್ರ ಮಾಡಿರುವ ಮಧುರಾಗೌಡ ಮಾತನಾಡಿ ಈ ಚಿತ್ರದಲ್ಲಿ ಸುಧಾರಾಣಿ ಅವರ ಮಗಳಾಗಿ ನಟಿಸಿದ್ದು ನನ್ನ ಅದೃಷ್ಟ ಎಂದು ತನ್ನ ಪಾತ್ರದ ಕುರಿತು ಹೇಳಿಕೊಂಡರು.

ಪೂರನ್ ಶೆಟ್ಟಿಗಾರ್ ಅವರ ಸಂಗೀತ ಸಂಯೋಜನೆ, ರಾಜು ಹೆಮ್ಮಿಗೆಪುರ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ.

ಉಳಿದಂತೆ ಕಲಾವಿದರಾದ ಬಲ ರಾಜವಾಡಿ, ಪುನೀತ್, ಅಶ್ವಿನ್‌ಹಾಸನ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದು ತಮ್ಮ ಪಾತ್ರಗಳ ಕುರಿತು ಮಾತನಾಡಿದರು.

# ಸಿನಿ ಸುದ್ದಿ



## ಕಿಯಾರಾ ಅಡ್ವಾಣಿ ಇಂಡಸ್ಟ್ರಿಯಲ್ಲಿ ಹತ್ತು ವರ್ಷಗಳನ್ನು ಪೂರೈಸಿದ ಮೇಲೆ ಹೇಳಿದರು: ನಾನು ಹೃದಯದಲ್ಲಿ ಇನ್ನೂ ಚಿಕ್ಕ ಹುಡುಗಿ



ನಟಿ ಕಿಯಾರಾ ಅಡ್ವಾಣಿ ಇತ್ತೀಚೆಗೆ ಚಿತ್ರರಂಗದಲ್ಲಿ 10 ವರ್ಷಗಳನ್ನು ಪೂರೈಸಿದ್ದಾರೆ. ಈ ವಿಶೇಷ ದಿನವನ್ನು ನಟಿ ತಮ್ಮ ಅಭಿಮಾನಿಗಳೊಂದಿಗೆ ಸಂತೋಷದಿಂದ ಆಚರಿಸಿದರು. ಈ ವೇಳೆ ಭಾವುಕರಾಗಿಯೂ ಕಾಣಿಸಿಕೊಂಡರು.

ಶಾಹಿದ್ ಕಪೂರ್ ಅಭಿನಯದ 'ಕಬೀರ್ ಸಿಂಗ್' ಚಿತ್ರದ ಮೂಲಕ ತಮ್ಮದೇ ಆದ ಛಾಪು ಮೂಡಿಸಿದ್ದ ನಟಿ ಕಿಯಾರಾ ಅಡ್ವಾಣಿ, ಜೂನ್ 13ಕ್ಕೆ ಚಿತ್ರರಂಗದಲ್ಲಿ 10 ವರ್ಷಗಳನ್ನು ಪೂರೈಸಿದರು. ನಟಿ ತಮ್ಮ ಅಭಿಮಾನಿಗಳೊಂದಿಗೆ ಈ ಸಂತೋಷವನ್ನು ಆಚರಿಸಿದರು, ಇದಕ್ಕಾಗಿ ಅವರು ಮೀಟ್ ಸೆಷನ್ ನ್ನು ಆಯೋಜಿಸಿದರು. ಅದರಲ್ಲಿ ಅವರು ಕೇಕ್ ಕತ್ತರಿಸುವ ಫೋಟೋಗಳು ಮತ್ತು ಹಳೆಯ ನೆನಪುಗಳು ಇದ್ದವು. ನಟಿ ಕೂಡ ತಮ್ಮ ಅಭಿಮಾನಿಗಳೊಂದಿಗೆ ಸಾಕಷ್ಟು ಮಾತನಾಡಿದ್ದಾರೆ ಮತ್ತು ಅವರೊಂದಿಗೆ ತಮ್ಮ ಸಂತೋಷವನ್ನು ಹಂಚಿಕೊಂಡಿದ್ದಾರೆ. ನಟಿ ಅದ್ಭುತವಾದ ಶೀರ್ಷಿಕೆಯನ್ನೂ ಬರೆದಿದ್ದಾರೆ.



**ನಟಿ ಉದ್ಯಮದಲ್ಲಿ 10 ವರ್ಷಗಳನ್ನು ಪೂರೈಸಿದ್ದಾರೆ:**

ಚಿತ್ರರಂಗದ ಟಾಪ್ ನಟಿಯರ ಪಟ್ಟಿಯಲ್ಲಿ ಕಿಯಾರಾ ಅಡ್ವಾ-ಣಿ ಸೇರಿದ್ದಾರೆ. ಜೂನ್ 13 ರಂದು ನಟಿ 10 ವರ್ಷಗಳನ್ನು ಪೂರೈಸಿದರು. ಈ ಸಂತೋಷದ ಸಂದರ್ಭದಲ್ಲಿ, ಕಿಂ-ಯಾರಾ ತಮ್ಮ ಇನ್ಸ್ಟಾದಲ್ಲಿ ಕೇಕ್ ಕತ್ತರಿಸುತ್ತಿರುವ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಈ ಸಮಯದಲ್ಲಿ ಅವರು ತುಂಬಾ ಸಂತೋಷದಿಂದ ಕಂಡರು. ನಟಿ ತಮ್ಮ ಹಳೆಯ ಫೋಟೋಗಳು ಮತ್ತು ವೀಡಿಯೊಗಳನ್ನು ಸಹ ಹಂಚಿಕೊಂಡಿದ್ದಾರೆ.

**ವಿಶೇಷ ಟಿಪ್ಪಣಿ ಬರೆದಿದ್ದಾರೆ:**

ಈ ವೀಡಿಯೊವನ್ನು ಹಂಚಿಕೊಳ್ಳುವಾಗ, ಕಿಯಾರಾ ಅಡ್ವಾಣಿ ವಿಶೇಷ ಟಿಪ್ಪಣಿಯನ್ನು ಬರೆದಿದ್ದಾರೆ. "ಈ ಉದ್ಯಮದಲ್ಲಿ 10 ವರ್ಷಗಳು ಕಳೆದಿದ್ದರೂ, ಇದು ನಿನ್ನೆ ಮೊನ್ನೆ ಸಂಭವಿಸಿದೆ ಎಂಬಂತೆ ಭಾಸವಾಗುತ್ತಿದೆ. ನಾನು ಇನ್ನೂ ಹೃದಯದಲ್ಲಿ ಚಿಕ್ಕ ಹುಡುಗಿ. ಆದರೆ ಕುಟುಂಬದ ಮುಂದೆ ಪ್ರದರ್ಶನ ನೀಡಲು ಉತ್ಸುಕಳಾಗಿದ್ದೇನೆ ." ಎಂದಿದ್ದಾರೆ. ನಟಿ ತನ್ನ ಕುಟುಂಬದ ಬಗ್ಗೆಯೂ ಪೋಸ್ಟ್‌ನಲ್ಲಿ ಹೇಳಿದ್ದಾರೆ. ನಟಿ ಫಗ್ಲಿ ಚಿತ್ರದೊಂದಿಗೆ ತನ್ನ ನಟನಾ ವೃತ್ತಿಯನ್ನು ಪ್ರಾರಂಭಿಸಿದ್ದರು.

**ಸಿದ್ಧಾರ್ಥ್ ಮಲ್ಹೋತ್ರಾ ಜೊತೆ ಮದುವೆ:**

ಕಿಯಾರಾ ಅಡ್ವಾಣಿ ತಮ್ಮ ವೃತ್ತಿ ಜೀವನದಲ್ಲಿ ಪ್ರತಿಯೊಂದು ನಿರ್ಧಾರವನ್ನು ಸಂಪೂರ್ಣವಾಗಿ ಸರಿಯಾಗಿ ತೆಗೆದು-ಕೊಂಡಿದ್ದಾರೆ. ತನ್ನ ಅಭಿನಯ ವೃತ್ತಿಜೀವನದಲ್ಲಿ ಯಶಸ್ಸನ್ನು ಸಾಧಿಸಿದ ನಂತರ, ನಟಿ ತನ್ನ ವೈಯಕ್ತಿಕ ಜೀವನದಲ್ಲಿ ಉತ್ತಮ ಜೀವನ ಸಂಗಾತಿಯನ್ನು ಕಂಡುಕೊಂಡರು ಮತ್ತು ಮದುವೆಯಾದರು.

**ಕಿಯಾರಾ ಅಡ್ವಾಣಿ ವರ್ಕ್ ಫ್ರಂಟ್:**

ಕಿಯಾರಾ ಅವರ ಸಿನಿಮಾ ಕೆರಿಯರ್ ಕೂಡ ತುಂಬಾ ಚೆನ್ನಾಗಿದೆ. ಅವರು ತಮ್ಮ 10 ವರ್ಷಗಳ ವೃತ್ತಿಜೀವನದಲ್ಲಿ ಅನೇಕ ಹಿಟ್ ಚಲನಚಿತ್ರಗಳನ್ನು ಮಾಡಿದ್ದಾರೆ.



ಅವರ ಮುಂಬರುವ ಚಿತ್ರಗಳೆಂದರೆ ಶೀಘ್ರದಲ್ಲೇ ರಾಮ್ ಚರಣ್ ಜೊತೆಗಿನ ರಾಜಕೀಯ ಆಕ್ಷನ್ ಥ್ರಿಲ್ಲರ್ ಗೇಮ್ ಚೇಂಜರ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದರೊಂದಿಗೆ, ಅವರು ರಣವೀರ್ ಸಿಂಗ್ ಅವರೊಂದಿಗೆ ಡಾನ್ 3 ಮತ್ತು ಜೂನಿಯರ್ ಎನ್ಟಿಆರ್ ಜೊತೆಗಿನ ವಾರ್ 2 ನಲ್ಲಿ ತಮ್ಮ ನಟನಾ ಕೌಶಲ್ಯವನ್ನು ತೋರಿಸಲಿದ್ದಾರೆ.

# ಸಫಾಯಿ ಕರ್ಮಚಾರಿಗಳಿಗೆ ಕಾನೂನಾತ್ಮಕವಾಗಿ ಎಲ್ಲ ಸೌಲಭ್ಯಗಳು ಸಿಗಬೇಕು: ಎಂ.ವೆಂಕಟೇಶ

ಧಾರವಾಡ:–

ಸಫಾಯಿ ಕರ್ಮಚಾರಿಗಳಾಗಿ ಕಾರ್ಯನಿರ್ವಹಿಸುವ ಪೌರ ಕಾರ್ಮಿಕರಿಗೆ ರಾಷ್ಟ್ರೀಯ ಮತ್ತು ರಾಜ್ಯ ಸರಕಾರಗಳಿಂದ ಕಾನೂನಾತ್ಮಕವಾಗಿ ಸೀಗಬೇಕಾದ ಎಲ್ಲ ಸೌಕರ್ಯ, ಸೌಲಭ್ಯಗಳನ್ನು ಪೂರೈಸುವುದು ಆಯಾ ಸ್ಥಳೀಯ ಸಂಸ್ಥೆ, ಇಲಾಖೆಗಳ ಮುಖ್ಯಸ್ಥರ ಕರ್ತವ್ಯವಾಗಿದೆ. ಪೌರಕಾರ್ಮಿಕರಿಗೆ ಸೀಗಬೇಕಾದ ಸವಲತ್ತುಗಳನ್ನು ನೀಡುವಲ್ಲಿ ಅನಗತ್ಯ ವಿಳಂಬ ಅಥವಾ ಅವುಗಳನ್ನು ತೀರಸ್ಕರಿಸಿದರೆ ಅಂತಹ ಅಧಿಕಾರಿಗಳ ಮೇಲೆ ಕಾನೂನಾತ್ಮಕ ಕ್ರಮ ತೆಗೆದುಕೊಳ್ಳಲು ಸರಕಾರಕ್ಕೆ ಶಿಫಾರಸ್ಸು ಮಾಡುವದಾಗಿ ರಾಷ್ಟ್ರೀಯ ಸಫಾಯಿ ಕಾರ್ಮಚಾರಿಗಳ ಆಯೋಗದ ಅಧ್ಯಕ್ಷ ಎಂ.ವೆಂಕಟೇಶನ್ ಅವರು ತಿಳಿಸಿದರು.



ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸಫಾಯಿ ಕರ್ಮಚಾರಿಗಳ ಸೌಲಭ್ಯ ಮತ್ತು ಸಮಸ್ಯೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಜಿಲ್ಲೆಯ ನಗರಸ್ಥಳೀಯ ಸಂಸ್ಥೆಗಳಲ್ಲಿ, ಸರಕಾರದ ಸ್ವಾಯತ್ತ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ಕನಿಷ್ಠ ವೇತನ ಖಾತರಿಪಡಿಸಬೇಕು. ಅವರಿಗೆ ಉತ್ತಮ ಉಪಹಾರ, ಊಟ ನೀಡಬೇಕು. ಪುರುಷ ಮತ್ತು ಮಹಿಳಾ ಪೌರ ಕಾರ್ಮಿಕರಿಗೆ ಪ್ರತ್ಯೇಕ ಶೌಚಾಲಯ, ವಿಶ್ರಾಂತಿ ಕೊಠಡಿ ಕಲ್ಪಿಸಬೇಕು. ಸಂರಕ್ಷಣ ಕವಚ, ಸಮವಸ್ತ್ರ, ಗಬೂಟ್ ವಿತರಿಸಬೇಕು. ಪ್ರತಿ ಸಫಾಯಿ ಕರ್ಮಚಾರಿಗೆ ನ್ಯಾಯಯುತವಾಗಿ ಸೀಗಬೇಕಾದ ಎಲ್ಲ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಅಧ್ಯಕ್ಷ ಎಂ.ವೆಂಕಟೇಶನ್ ಹೇಳಿದರು.

ಸಫಾಯಿ ಕರ್ಮಚಾರಿಗಳಿಂದ ಸಮಸ್ಯೆ, ದೂರುಗಳನ್ನು ಖುದ್ದು ಆಲಿಸಿ, ಸಂಬಂಧಿಸಿದ ಅಧಿಕಾರಿಗಳಿಂದ ಅವರು ಉತ್ತರ ಪಡೆದರು. ಕಲಘಟಗಿ, ಅಳ್ನಾವರ ಪಟ್ಟಣ ಪಂಚಾಯಿತಿಗಳಲ್ಲಿ ಪೌರ ಕಾರ್ಮಿಕರಿಗೆ ನಿಯಮಿತವಾಗಿ ಮಾಸಿಕ ವೇತನ ಆಗುತ್ತಿಲ್ಲ ಎಂಬುದನ್ನು ತಿಳಿದು, ಅಲ್ಲಿನ ಮುಖ್ಯಾಧಿಕಾರಿಗಳಿಗೆ ಮುಂದಿನ ಎರಡು ಮೂರು ದಿನಗಳಲ್ಲಿ ವೇತನ ಪಾವತಿಸುವಂತೆ ಅಧ್ಯಕ್ಷರು ನಿರ್ದೇಶನ ನೀಡಿದರು.

ಪೌರ ಕಾರ್ಮಿಕರಿಂದ, ಪೌರ ಕಾರ್ಮಿಕ ಸಂಘಟನೆಗಳಿಂದ ಸಮಸ್ಯೆಗಳನ್ನು ಆಲಿಸಿದ ಆಯೋಗದ ಅಧ್ಯಕ್ಷರು, ಮುಂದಿನ ಆರು ತಿಂಗಳಲ್ಲಿ ಪರಿಹರಿಸಿ, ವರದಿ ನೀಡಬೇಕು. ಸಫಾಯಿ ಕರ್ಮಚಾರಿಗಳಿಗೆ ತೊಂ ದರೆ, ಕಿರುಕುಳ ಆದರೆ ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಿ, ಮಾಹಿತಿ ನೀಡಬೇಕು ಮತ್ತು ಆಯೋಗಕ್ಕೆ ದೂರು ಸಲ್ಲಿಸಲು ಬಯಸಿದಲ್ಲಿ ದೂರವಾಣಿ ಸಂಖ್ಯೆ : 01124648924 ಗೆ ಕರೆ ಮಾಡಿ ತಿಳಿಸಬಹುದು ಅಥವಾ ವೆಸೈಟ್ ಮೂಲಕ ತಮ್ಮ ದೂರು ದಾಖಲಿಸಬಹುದು.

ಸೂಕ್ತ ತನಿಖೆ ನಡೆಸಿ ಪರಿಹರಿಸಲಾಗುವುದು ಮತ್ತು ತಪ್ಪು ಮಾಡಿದ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

# ಕಿನಲ್ಲಿ ಹಾರಿದು ಹೋಗುವ ತುಂಗಭದ್ರ ನದಿಯಲ್ಲಿ ಮೊಸಳೆ ಕಾಟ, ಹಸು ಬಲಿ

ಸಿರುಗುಪ್ಪ:–

ತಾಲೂಕಿನ ನಡಿವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಉಡೇಗೋಳ ಗ್ರಾಮದ ಹತ್ತಿರ ತುಂಗಭದ್ರ ನದಿಯಲ್ಲಿ ಹಸುವೊಂದನ್ನು ಮೊಸಳೆಗಳು ಎಳೆದೊಯ್ದಿದ್ದು, ಈ ಭಾಗದಲ್ಲಿ 30ಕ್ಕೂ ಹೆಚ್ಚು ಮೊಸಳೆಗಳು ಕಾಣಿಸಿಕೊಂಡಿದ್ದು, ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.



ತಾಲೂಕಿನಲ್ಲಿ ಹರಿಯುವ ತುಂಗಭದ್ರ ನದಿಪಾತ್ರದಲ್ಲಿ ಉತ್ತಮ ಮಳೆಯಾಗಿದ್ದು, ನದಿಯಲ್ಲಿ ನೀರು ಹರಿಯುತ್ತಿದ್ದು, ನದಿಯ ಉದ್ದಕ್ಕೂ ನೀರಿನ ಹರಿವು ಹೆಚ್ಚಾಗಿದ್ದು, ನಡಿವಿ ಮತ್ತು ಉಡೇಗೋಳ ಗ್ರಾಮದ ಮಧ್ಯದಲ್ಲಿ ಹರಿಯುವ ತುಂಗಭದ್ರ ನದಿಯಲ್ಲಿ ಗ್ರಾಮಸ್ಥರ ದನಕರುಗಳು ಮೇವು ಮೇಯಲು ನದಿ ದಂಡೆಯಲ್ಲಿರುವ ಜಮೀನುಗಳಿಗೆ ತೆರಳುತ್ತಿದ್ದು, ಬುಧವಾರ ಸಂಜೆ ಮೇವು ಮೇಯಲು ತೆರಳಿದ್ದ ಹಸುವೊಂದನ್ನು ಮೊಸಳೆಗಳ ಗುಂಪು ದಾಳಿ ಮಾಡಿ ನದಿ ಮಧ್ಯದಲ್ಲಿ ಎಳೆದೊಯ್ದು ತಿನ್ನುವ ದೃಶ್ಯ ಕಂಡು ಬಂದಿದ್ದು, ಗ್ರಾಮಸ್ಥರಲ್ಲಿ ಭಯ ಆರಂಭವಾಗಿದೆ.

ಕಳೆದ ವರ್ಷ ದನಗಳ ಹಿಂಡಿನೊಂದಿಗೆ ನದಿಯನ್ನು ದಾಟಿ ಜಮೀನಿಗೆ ಹೋಗುತ್ತಿದ್ದ ನಿಟ್ಟೂರು ಗ್ರಾಮದ ಯುವಕನ ಮೇಲೆ ಮೊಸಳೆಯೊಂದು ದಾಳಿ ಮಾಡಿದ ಪರಿಣಾಮ ಸಾವನ್ನಪ್ಪಿದ್ದ ಘಟನೆ ನಡೆದಿದ್ದು, 2 ದಿನಗಳ ಹಿಂದೆ ಉಡೇಗೋಳ ಭಾಗದಲ್ಲಿ ಹಸುವೊಂದನ್ನು ಮೊಸಳೆಗಳು ತಿನ್ನುವ ವೀಡಿಯೋ ಎಲ್ಲೆಡೆ ವೈರಲ್ ಆಗಿತ್ತು.

ಆದರೆ ಬುಧವಾರ ಮತ್ತೊಂದು ಹಸುವಿನ ಮೇಲೆ ಮೊಸಳೆಗಳ ಹಿಂಡು ದಾಳಿ ಮಾಡಿದ್ದನ್ನು ಕಂಡ ಉಡೇಗೋಳ ಗ್ರಾಮಸ್ಥರು ನದಿ ದಂಡೆಗೆ ಯಾರು ತೆರಳದಂತೆ ನಡಿವಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ಬುಧವಾರ ಸಂಜೆ ಟಾಂಟಾಂ ಹಾಕಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡಿದ್ದಾರೆ. ಆದರೆ ಮೊಸಳೆದಾಳಿಗೆ ತುತ್ತಾದ ಹಸುವಿನ ಮಾಲಿಕರು ಯಾರು ಎನ್ನುವ ಬಗ್ಗೆ ಯಾವುದೇ ಮಾಹಿತಿ ಇಲ್ಲವೆಂದು ಗ್ರಾಮಸ್ಥರು ತಿಳಿಸಿದ್ದಾರೆ.

ನಡಿವಿ ಮತ್ತು ಉಡೇಗೋಳ ಗ್ರಾಮದ ನಡುವೆ ಹರಿಯುವ ತುಂಗಭದ್ರ ನದಿಯಲ್ಲಿ ಮೊಸಳೆಗಳು ಗುಂಪು ಗುಂಪಾಗಿ ಕಾಣಿಸಿಕೊಂಡಿದ್ದು, ಸಾರ್ವಜನಿಕರಿಗೆ ನದಿ ದಂಡೆಗೆ ತೆರಳದಂತೆ ಮತ್ತು ದನಕರುಗಳನ್ನು ನದಿಕಡೆಗೆ ಬಿಡದಂತೆ ಮಾಹಿತಿ ನೀಡಲಾಗಿದೆ ಎಂದು ಗ್ರಾ.ಪಂ. ಅಧ್ಯಕ್ಷೆ ಉಮಾ ಸತ್ಯನಾರಾಯಣ ತಿಳಿಸಿದ್ದಾರೆ. ಮೊಸಳೆಗಳು ಹೆಚ್ಚಾಗಿರುವುದರಿಂದ ಗ್ರಾಮಸ್ಥರು ನದಿ ದಂಡೆಗೆ ತೆರಳಬಾರದು, ಈ ಬಗ್ಗೆ ಟಾಂಟಾಂ ಮೂಲಕ ಗ್ರಾಮಸ್ಥರಿಗೆ ಎಚ್ಚರಿಕೆಯನ್ನು ನೀಡಲಾಗಿದೆ ಎಂದು ಪಿ.ಡಿ.ಓ. ಅನ್ನಪೂರ್ಣ ತಿಳಿಸಿದ್ದಾರೆ. ತುಂಗಭದ್ರ ನದಿ ಪಾತ್ರದಲ್ಲಿರುವ ಎಲ್ಲಾ ಗ್ರಾಮಗಳಲ್ಲಿ ಮೊಸಳೆಗಳು ಇರುವ ಬಗ್ಗೆ ಮಾಹಿತಿ ಫಲಕವನ್ನು ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗುವುದೆಂದು ಸಿರುಗುಪ್ಪ ವಲಯ ಅರಣ್ಯಾಧಿಕಾರಿ ಗಿರೀಶ್ ತಿಳಿಸಿದ್ದಾರೆ.

# ಸಫಾಯಿ ಕರ್ಮಚಾರಿಗಳ ಪ್ರಗತಿ ಪರಿಶೀಲನಾ ಸಭೆ

ಗದಗ:–

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಇರುವ ಸೌಲಭ್ಯ ತಲುಪಿಸುವಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳ ಪಾತ್ರ ಪ್ರಮುಖವಾಗಿದೆ. ಅಧಿಕಾರಿಗಳು ಪ್ರಾಮಾಣಿಕವಾಗಿ ಅವರಿಗೆ ದೊರಕಬೇಕಾದ ವೇತನ ಸೌಲಭ್ಯಗಳನ್ನು ಒದಗಿಸುವಲ್ಲಿ ಶ್ರಮಿಸಬೇಕು ಎಂದು ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾದ ಎಂ.ವೆಂಕಟೇಶನ್ ಅವರು ನಿರ್ದೇಶನ ನೀಡಿದರು.




ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಸಫಾಯಿ ಕರ್ಮಚಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ನಿಗದಿತ ಸಮಯಕ್ಕೆ ನಿಗದಿಪಡಿಸಿದ ವೇತನ ಪಾವತಿಸುವುದು ಹಾಗೂ ವಿವಿಧ ಸೌಲಭ್ಯಗಳನ್ನು ದೊರಕಿಸಿಕೊಡುವುದು ಅಧಿಕಾರಿಗಳು ಮಾಡಬೇಕು. ಗುತ್ತಿಗೆ ಸಫಾಯಿ ಕರ್ಮಚಾರಿಗಳಿಗೆ ಗುತ್ತಿಗೆ ಏಜೆನ್ಸಿದಾರರು ಸಮಯಕ್ಕೆ ಸರಿಯಾಗಿ ನಿಗದಿಪಡಿಸಿದ ವೇತನ ಸೌಲಭ್ಯಗಳನ್ನು ವಿತರಿಸುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಹಾಗೂ ವೇತನದೊಂದಿಗೆ ಇ.ಎಸ್.ಐ ಪಿಎಫ್ ಪಾವತಿಸುವ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಇದ್ದಲ್ಲಿ ಮಾತ್ರವೇ ಗುತ್ತಿಗೆದಾರರಿಗೆ ಹಣ ಸಂದಾಯ ಮಾಡಬೇಕು ಎಂದು ಸೂಚಸಿದರು.

ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕಾರ್ಮಿಕರಿಗೆ ಇರುವ ಸೌಲಭ್ಯಗಳ ಬಗ್ಗೆ ನಿಗದಿಪಡಿಸಿದ ವೇತನಗಳು ಸಂದರ್ಭಾನುಸಾರ ನಿಗದಿತ ಸಮಯಕ್ಕೆ ಪಾವತಿಸುವ ಬಗ್ಗೆ ಪರಿಶೀಲನೆ ಕೈಗೊಳ್ಳಬೇಕು. ಕಾರ್ಮಿಕರ ಕೆಲಸಕ್ಕೆ ಸರಿಯಾಗಿ ವೇತನ ಸಂದಾಯ ಮಾಡುವ ಜವಾಬ್ದಾರಿ ಇಲಾಖಾ ಮುಖ್ಯಸ್ಥರದ್ದಾಗಿದ್ದು ಅದು ಸರಿಯಾಗಿ ಆಗುತ್ತಿರುವ ಬಗ್ಗೆ ಖಚಿತಪಡಿಸಕೊಳ್ಳಬೇಕು. ಅಲ್ಲದೇ ಕಾರ್ಮಿಕರಿಗೆ ಇರುವ ರಜೆ ಸೌಲಭ್ಯಗಳು ದೊರಕುತ್ತಿರುವ ಬಗ್ಗೆ ಇಲಾಖೆಯ ವಿವಿಧ ಹಂತದ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಜಿಲ್ಲೆಯ ವಿವಿಧ ತಾಲೂಕು ಹಾಗೂ ಸ್ಥಳೀಯ ಸಂಸ್ಥೆಗಳಿಂದ ಆಗಮಿಸಿದ ಸಫಾಯಿ ಕರ್ಮಚಾರಿಗಳು ಮತ್ತು ಪೌರ ಕಾರ್ಮಿಕರೊಂದಿಗೆ ಆಯೋಗದ ಅಧ್ಯಕ್ಷ ಸಂಯಮದಿಂದ ಕುಂದುಕೊರತೆಗಳನ್ನು ಆಲಿಸಿ ವೇತನ ಹಾಗೂ ಇತರೇ ಸಂರಕ್ಷಣಾ ಸೌಲಭ್ಯಗಳು ವಿತರಣೆಯಾಗುತ್ತಿರುವ ಬಗ್ಗೆ ಖಚಿತಪಡಿಸಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಟಾದಿಕಾರಿ ಬಿ.ಎಸ್.ನೇಮಗೌಡ, ನಗರಸಭೆ ಪೌರಾಯುಕ್ತರಾದ ಪ್ರಶಾಂತ ವರಗಪ್ಪನವರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್ , ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು , ಸಫಾಯಿ ಕರ್ಮಚಾರಿಗಳು, ಪೌರ ಕಾರ್ಮಿಕರು ಹಾಜರಿದ್ದರು.

# ವಿದ್ಯುತ್ ಸ್ಪರ್ಶ: ಯುವಕ ಸಾವು

ಕೂಡ್ಲಿಗಿ:–

ಪಂಪ್ ಸೆಟ್ ಗೆ ಅಳವಡಿಸಲಾಗಿದ್ದ ವಿದ್ಯುತ್ ಸಂಪರ್ಕದ ವೈಯರ್ ಕಟ್ ಆಗಿದ್ದನ್ನು ಸರಿಪಡಿಸುತ್ತಿರುವ ಯುವಕನಿಗೆ ಆಕಸ್ಮಿಕ ವಿದ್ಯುತ್ ಸ್ಪರ್ಶವಾಗಿ ಸ್ಥಳದಲ್ಲೇ ಮೃತಪಟ್ಟ ಘಟನೆ ಗುರುವಾರ ಮಧ್ಯಾಹ್ನ ತಾಲೂಕಿನ ಮಾಕನಡುಕು ಗ್ರಾಮದ ಹೊರವಲಯದಲ್ಲಿ ಜರುಗಿದೆ. ಕೂಡ್ಲಿಗಿ ತಾಲೂಕಿನ ಬೆಳಗಟ್ಟ ಗ್ರಾಮದ ನಾಗರಾಜ(28) ವಿದ್ಯುತ್ ಸ್ಪರ್ಶದಿಂದ ಮೃತಪಟ್ಟ ದುರ್ದೈವಿ ಯುವಕನಾಗಿದ್ದಾನೆ ಈತನು ಗುರುವಾರ ಮಧ್ಯಾಹ್ನ ತಮ್ಮ ಜಮೀನಿಗೆ ಹೋಗಿ ಅಲ್ಲಿನ ಪಂಪ್ ಸೆಟ್ ಗೆ ಕಲ್ಪಿಸಲಾಗಿದ್ದ ವಿದ್ಯುತ್ ಸಂಪರ್ಕದಲ್ಲಿ ಜಮೀನು ಕೆಲಸ ಮಾಡುವಾಗ ವೈಯರ್ ಕಟ್ ಅಗಿರುವುದನ್ನು ಗಮನಿಸಿ ಅಲ್ಲೇ ಇದ್ದ ಕಟಿಂಗ್ ಪ್ಲೇಯರ್ ನಿಂದ ದುರಸ್ತಿ ಮಾಡುವಾಗ ಅಕಸ್ಮಿಕವಾಗಿ ತಗುಲಿದ ವಿದ್ಯುತ್ ಸ್ಪರ್ಶದಿಂದ ಯುವಕ ನಾಗರಾಜ ಘಟನಾ ಸ್ಥಳದಲ್ಲೇ ಮೃತಪಟ್ಟಿದ್ದಾನೆ.



ವಿಷಯ ತಿಳಿದ ತಕ್ಷಣ ಘಟನಾ ಸ್ಥಳಕ್ಕೆ ಹೊಸಹಳ್ಳಿ ಪೊಲೀಸ್ ಠಾಣೆಯ ಆಪರಾಧ ವಿಭಾಗದ ಪಿಎಸೈ ನಾಗರತ್ನ, ಚಿಕ್ಕಜೋಗಿಹಳ್ಳಿ ಜೆಸ್ಕಾಂ ಜೆ.ಇ. ಆನಂದ ಭೇಟಿ ನೀಡಿದ್ದಾರೆ. ಮೃತನ ತಂದೆ ಶರಣಪ್ಪ ನೀಡಿದ ದೂರಿನಂತೆ ಕಾನಹೊಸಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪೌಷ್ಟಿಕ ಆಹಾರ ಸೇವನೆಯಿಂದ ಗರ್ಭಿಣಿಯರು, ಕಿಶೋರಿಯರ ಆರೋಗ್ಯ ಸದೃಢ: ಓಬಣ್ಣ



ಕೂಡ್ಲಿಗಿ:–

ಗರ್ಭಿಣಿಯರು ಹಾಗೂ ಕಿಶೋರಿಯರು ರಕ್ತಹೀನತೆಯಿಂದ ಬಳಲದೆ ಹಸಿರು ತರಕಾರಿ, ಸೊಪ್ಪು, ಮೊಟ್ಟೆಯಂತಹ ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ದೈಹಿಕ, ಶಾರೀರಿಕ ಹಾಗೂ ಮಾನಸಿಕ ಸದೃಢರಾಗುವಂತೆ ಆರೋಗ್ಯ ಇಲಾಖೆಯ ಆರ್ ಕೆ ಎಸ್ ಕೆ ವಿಭಾಗದ ಆಪ್ತಸಮಾಲೋಚಕ ಓಬಣ್ಣ ತಿಳಿಸಿದರು.

ಪಟ್ಟಣದ ಆಜಾದ್ ನಗರದ ಅಂಗನವಾಡಿ ಬಿ ಕೇಂದ್ರದಲ್ಲಿ ಗುರುವಾರ ಆಯೋಜಿಸಿದ ಪೌಷ್ಟಿಕ ಶಿಬಿರದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತ ಬಾಯಿ ರುಚಿಗೆ ಬೇಕರಿ ಪದಾರ್ಥ ಆಹಾರವಾಗಿ ಬಳಸಿಕೊಳ್ಳದೆ ತರಕಾರಿ ಸೊಪ್ಪು ಹಣ್ಣುಗಳನ್ನು ಹೆಚ್ಚಾಗಿ ಬಳಸಿ ಆಹಾರ ಸೇವನೆ ಮಾಡುವುದರಿಂದ ರಕ್ತದ ಅಂಶ ವೃದ್ಧಿಯಾಗುತ್ತದೆ ಅಲ್ಲದೆ ನುಗ್ಗೆ ಸೊಪ್ಪು ಸೇವನೆಯಿಂದ ಅದರಲ್ಲಿರುವ ಖನಿಜಾಂಶದಿಂದ ಮಗುವಿನ ಮೂಳೆಗಳು ಸದೃಢವಾಗುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆರೋಗ್ಯ ಸುರಕ್ಷಾಧಿಕಾರಿ ಗಿರಿಜಾ ಅಂಜಿನಪ್ಪ ಮಾತನಾಡಿ ಮಹಿಳೆಯರು, ಗರ್ಭಿಣಿ ಸ್ತ್ರೀಯರು ಹಾಗೂ ಕಿಶೋರಿಯರು ಆರೋಗ್ಯದ ಕಡೆ ಗಮನಹರಿಸಿ ಆರೋಗ್ಯ ಇಲಾಖೆಯಿಂದ ಸಲಹೆ ಸೂಚನೆ ಪಡೆದು ಉತ್ತಮ ಆಹಾರ ಸೇವನೆ ಮಾಡುವುದರಿಂದ ರಕ್ತಹೀನತೆಯಿಂದ ಬಳಲದೇ ದೈಹಿಕವಾಗಿ ಸದೃಢರಾಗಿರಲು ಸಾಧ್ಯವಾಗುತ್ತದೆ ಮತ್ತು ಮಗುವಿಗೆ ತಾಯಿ ಹಾಲೇ ಶ್ರೇಷ್ಠವಾಗಿದ್ದು ಮಕ್ಕಳ ಆರೋಗ್ಯಕ್ಕೆ ತಾಯಿ ಎದೆಹಾಲು ಕುಡಿಸುವುದರಿಂದ ಮಗುವು ಸದೃಢವಾಗಿ ಬೆಳೆಯಲು ಸಹಾಯಕವಾಗುತ್ತದೆ ಎಂದು ತಾಯಿ ಹಾಲಿನ ಮಹತ್ವ ಕುರಿತು ತಿಳಿಸಿದರು.

ಹೆಚ್ ಐ ಓ ಸುನೀತ ಮಾತನಾಡಿ ಗರ್ಭಿಣಿ ಸ್ತ್ರೀಯರು ಹಾಗೂ ಕಿಶೋರಿಯರು ರಕ್ತಹೀನತೆಯಿಂದ ಬಳಲದೇ ಐಎಫ್ಎ ಮಾತ್ರೆಗಳನ್ನು ಸೇವಿಸುವಂತೆ ಹಾಗೂ ಪೌಷ್ಟಿಕ ಆಹಾರದ ಮಹತ್ವ ತಿಳಿದು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ತಿಳಿಸಿದರು.

ಅಂಗನವಾಡಿ ಬಿ ಕೇಂದ್ರದ ಕಾರ್ಯಕರ್ತೆ ಮಹಾಂತಮ್ಮ, ಆಶಾ ಕಾರ್ಯಕರ್ತರಾದ ಉಮಾ ಲತಾ ಮತ್ತು ಗರ್ಭಿಣಿ ಮಹಿಳೆಯರು ತಾಯಂದಿರು ಕಿಶೋರಿಯರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಮುಂಜಾಗ್ರತೆಗೆ ಸೂಚನೆ: ದಿವ್ಯ ಪ್ರಭು

ಧಾರವಾಡ:–

ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ ಅಂತಹ ಕೀಟಜನ್ಯ ರೋಗಗಳು ಹೆಚ್ಚಳವಾಗದಂತೆ ನಗರ ಹಾಗೂ ಗ್ರಾಮೀಣ ಭಾಗದಲ್ಲಿ ವ್ಯಾಪಕವಾಗಿ ಸಾರ್ವಜನಿಕ ತಿಳುವಳಿಕೆ ಹಾಗೂ ಸಮೀಕ್ಷಾ ಕಾರ್ಯಗಳನ್ನು ಅಭಿಯಾನ ಮಾದರಿಯಲ್ಲಿ ಹಮ್ಮಿಕೊಳ್ಳಬೇಕು. ಮುಂದಿನ 15 ದಿನಗಳಲ್ಲಿ ಡೆಂಗ್ಯೂ ಶಂಕಿತ ಪ್ರಕರಣಗಳು ಕಡಿಮೆ ಆಗಿ, ಜ್ವರಪೀಡಿತರ ಸಂಖ್ಯೆ ಇಳಿಮುಖವಾಗದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಪಬ್ಲಿಕ್ ನೆಗ್ಲಿಜೆನಸಿ ಕ್ಟ್ ಕೆಳಗೆ ಕ್ರಿಮಿನಲ್ ಕೇಸ್ ದಾಖಲಿಸುವದಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.



ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡೆಂಗ್ಯೂ ಶಂಕಿತ ಪ್ರಕರಣಗಳ ಪರಿಶೀಲನೆ ಹಾಗೂ ಆರೋಗ್ಯ, ಕಂದಾಯ, ಪಂಚಾಯತ ರಾಜ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರ ಸಭೆ ಜರುಗಿಸಿ, ಮಾತನಾಡಿದರು.

ಸಕಾಲಕ್ಕೆ ಸಾರ್ವಜನಿಕರಿಗೆ ಸ್ಪಂದಿಸದೆ, ಅಧಿಕಾರಿಗಳ ನಿರ್ಲಕ್ಷ ಮತ್ತು ನಿಧಾನಗತಿಯಿಂದ ಯಾವುದೇ ಜೀವ ಹಾನಿ ಆದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುತ್ತದೆ.

ತಂಡಗಳಾಗಿ ಶಂಕಿತ ಪ್ರಕರಣಗಳಿರುವ ಗ್ರಾಮಗಳಿಗೆ ಅಧಿಕಾರಿ, ಸಿಬ್ಬಂದಿಗಳು ಭೇಟಿ ನೀಡಿ, ಜನರಿಗೆ ರೋಗಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಅವರು ಹೇಳಿದರು.

ಜಿಲ್ಲಾ ಆರೋಗ್ಯ ಅಧಿಕಾರಿ ಪ್ರತಿ ದಿನ ಡೆಂಗ್ಯೂ ಪ್ರಕರಣಗಳ ಕುರಿತು ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಿಂದ ಮಾಹಿತಿ ಸಂಗ್ರಹಿಸಿ, ಜಿಲ್ಲಾಡಳಿತಕ್ಕೆ ಕಳುಹಿಸಬೇಕು. ಜಿಲ್ಲೆಯ ಗ್ರಾಮ ಪಂಚಾಯತವಾರು ಹಮ್ಮಿಕೊಳ್ಳುವ ಐಇಸಿ ಕಾರ್ಯಕ್ರಮಗಳ ಕುರಿತು ಪಟ್ಟಿ ತಯಾರಿಸಿ, ಸಲ್ಲಿಸಬೇಕು. ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಮತ್ತು ಕೀಟಜನ್ಯ ರೋಗಗಳ ನಿಯಂತ್ರಣದಲ್ಲಿ ಆರೋಗ್ಯ, ಕಂದಾಯ, ಪಂಚಾಯತ ರಾಜ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು ಜಂಟಿಯಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ವಾರದಲ್ಲಿ ಎರಡು ದಿನ ಡ್ರೈ ಡೆ ಮಾಡಿ: ಕೀಟಜನ್ಯ ರೋಗಗಳಾದ ಡೆಂಗ್ಯೂ, ಚಿಕಗುನ್ಯಾ ಪ್ರಕರಣಗಳ ನಿಯಂತ್ರಣದಲ್ಲಿ ಡ್ರೈ ಡೆ ಮಾಡುವುದು ಮುಖ್ಯವಾಗಿದೆ. ಗ್ರಾಮದ ನೀರು ಸರಬರಾಜು ವೇಳೆಯನ್ನು ತಿಳಿದುಕೊಂಡು, ನೀರು ಸರಬರಾಜು ಆಗುವ 12 ಗಂಟೆ ಮೊದಲು ನೀರು ಸಂಗ್ರಹಿಸುವ ಪರಿಕರಗಳನ್ನು ಚನ್ನಾಗಿ ತೊಳೆದು, ಒಣ ಅರಿವೆಯಿಂದ ಒರಸಿ ಇಡಬೇಕು. 12 ತಾಸುಗಳ ನಂತರ ನೀರು ಬಂದ ಮೇಲೆ ಮತ್ತೇ ಅವುಗಳಲ್ಲಿ ನೀರು ತುಂಬಬೇಕು. ಅರ್ಧ ಬಳಸಿ, ಉಳಿದ ನೀರಿನಲ್ಲಿ ಮತ್ತೇ ನೀರು ತುಂಬಬಾರದು. ಮನೆ ಸುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಮನೆಯ ಸುತ್ತ ಯಾವುದೇ ರೀತಿಯ ತ್ಯಾಜ್ಯ ಸಂಗ್ರಹವಾಗದಂತೆ ನೋಡಿಕೊಳ್ಳಬೇಕು. ವಿಶೇಷವಾಗಿ ಪ್ಲಾಸ್ಟಿಕ ಬಾಟಲ್, ಟೈಯರ್ ಮುಂತಾದವುಗಳ ಬಗ್ಗೆ ಜಾಗೃತಿ ವಹಿಸಬೇಕು. ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಅವರು ತಿಳಿಸಿದರು.

ಮುಮ್ಮಿಗಟ್ಟಿ ಮನೆಮನೆ ಸಮೀಕ್ಷೆ: ಧಾರವಾಡ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಮತ್ತು ಅವಳಿ ನಗರದ ಕೆಲವು ಶಹರ ಪ್ರದೇಶಗಳಲ್ಲಿ ಜ್ವರ ಪೀಡಿತರಿಂದಾಗಿ ಡೆಂಗ್ಯೂ ಶಂಕಿತರ ಪ್ರಕರಣಗಳು ಹೆಚ್ಚಳವಾಗುತ್ತಿವೆ. ಅಧಿಕಾರಿಗಳು ಹೆಚ್ಚು ಮುಂಜಾಗ್ರತೆವಹಿಸಿ, ನಿಯಂತ್ರಣಕ್ಕೆ ಕ್ರಮವಹಿಸಬೇಕು.

ಮುಮ್ಮಿಗಟ್ಟಿ, ನರೇಂದ್ರ, ಬೇಲೂರ, ಧಾರವಾಡ ನಗರದ ಆದರ್ಶ ನಗರ, ನೆಹರುನಗರ ಪ್ರದೇಶಗಳಲ್ಲಿ ಆರೋಗ್ಯ ಇಲಾಖೆ, ಆಶಾ ಕಾರ್ಯಕರ್ತೆಯರು ಹಾಗೂ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳಿಂದ ಮನೆ ಮನೆ ಸಮೀಕ್ಷೆ ಮಾಡಿ, ಆರೋಗ್ಯ ದಾಖಲಾತಿ ಮಾಡಬೇಕು. ಪ್ರತಿ ಮನೆಯಲ್ಲಿ ನೀರು ಸಂಗ್ರಹದ ಕುರಿತು ಕುಟುಂಬ ಸದಸ್ಯರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವಿಶೇಷವಾಗಿ ಮುಮ್ಮಿಗಟ್ಟಿ ಗ್ರಾಮದಲ್ಲಿ ಇರುವ ಸುಮಾರು 3,200 ಮನೆಗಳ ಸರ್ವೆ ಮಾಡಬೇಕು. ಅಂದಾಜು 8 ಸಾವಿರ ಜನಸಂಖ್ಯೆಯನ್ನು ಸಮೀಕ್ಷೆಗೆ ಒಳಪಡಿಸಬೇಕು. ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿಗಳು ಮತ್ತು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಜಂಟಿ ಆಗಿ ಸಮೀಕ್ಷೆ ಮತ್ತು ಐಇಸಿ ಕಾರ್ಯಕ್ರಮಗಳನ್ನು ಗ್ರಾಮದಲ್ಲಿ ಹಮ್ಮಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಹೇಳಿದರು.

Editor:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER’s & PUBLISHER’s,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.